ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ನುಡಿದಂತೆ ನಡೆದ ತೃಪ್ತಿ ನಮಗಿದೆ:ಲಕ್ಷ್ಮೀ ಹೆಬ್ಬಾಳಕರ

ಯರಗಟ್ಟಿ: ಬಿಜೆಪಿಯ ಮೊದಲ ಅವಧಿಯಲ್ಲಿ ಪ್ರತಿ ಜನಧನ್ ಖಾತೆಗೆ ರೂ. 15 ಲಕ್ಷ ಹಣ ಜಮಾ ಮಾಡುವುದಾಗಿ ಹೇಳಿ ಮಾತು ಬದಲಿಸಿದ್ದು ಒಂದೆಡೆಯಾದರೆ, ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಮಾತು ಕೊಟ್ಟಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ನುಡಿದಂತೆ ನಡೆದಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು.

ಸ್ಥಳೀಯ ಶ್ರೀಶೈಲ ಮಲ್ಲಿಕಾರ್ಜುನ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಸರಕಾರದ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ದೇಶದ ಜನರಿಗೆ ಎರಡು ಕೋಟಿ ಉದ್ಯೋಗ ನೀಡೋದಾಗಿ ಹೇಳಿ ಬಿಜೆಪಿ ಮಾತು ತಪ್ಪಿದೆ. ಮತ್ತೊಂದೆಡೆ, ಕೇವಲ ಒಂಬತ್ತು ತಿಂಗಳಲ್ಲಿ ರಾಜ್ಯದ ಕಾಂಗ್ರೆಸ್ ಸರಕಾರ 15 ಸಾವಿರ ಜನರಿಗೆ ಸರಕಾರಿ ಉದ್ಯೋಗ ನೀಡಿದೆ ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ಒಳ್ಳೊಳ್ಳೆಯ ಕಾರ್ಯಕ್ರಮಗಳನ್ನು ನೀಡುತ್ತಾ ಬಂದಿದೆ ಹಾಗೂ ಯರಗಟ್ಟಿ ಭಾಗದ ಜನರ ಬಹುದಿನಗಳ ಬೇಡಿಕೆಯಾದ ನೀರಾವರಿ ಯೋಜನೆಗಳನ್ನು ಶೀಘ್ರವಾಗಿ ಅನುಷ್ಠಾನಗೊಳಾಗುವುದು. ಹಾಗೂ ಅಂಗನವಾಡಿ ಆಶಾ ಕಾರ್ಯಕರ್ತೆಯರ ಗೌರವಧನವನ್ನು ಹೆಚ್ಚಿಸಲು ನಮ್ಮ ಸರಕಾರ ಬದ್ಧವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು.

ಜನರ ನಂಬಿಕೆ ಉಳಿಸಿಕೊಳ್ಳಲು ಚುನಾವಣಾ ಪೂರ್ವದಲ್ಲಿ ನೀಡಿದ್ದ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿರುವುದಾಗಿ ನುಡಿದರು. ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನ ಕುರಿತು ಪ್ರಸ್ತಾಪಿಸಿದ ಅವರು, ಗೃಹಲಕ್ಷ್ಮಿ ಯೋಜನೆ ಪ್ರತಿ ಕುಟುಂಬದ ಒಬ್ಬ ಮಹಿಳೆಗೆ ತಲಾ ರೂ.2000 ನೀಡುವ ಗ್ಯಾರಂಟಿ ಈ ರಾಜ್ಯದಲ್ಲಿ ಜಾರಿಗೆ ಬರಬೇಕಾದರೆ ನಮ್ಮ ನಾಯಕ ಜನಪ್ರಿಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಕಾರಣ ಎಂದು ಪ್ರಸ್ತಾಪಿಸಿದರು.

ನಂತರ ಮಾತನಾಡಿದ ಸವದತ್ತಿ ಶಾಸಕ ವಿಶ್ವಾಸ ವೈದ್ಯ ಗ್ಯಾರಂಟಿ ಯೋಜನೆಗಳು ಯಾರಿಗೆ ಸಿಕ್ಕಿಲ್ಲ ಅಂತವರಿಗೆ ಕೊಡಿಸುವ ವ್ಯವಸ್ಥೆ ಮಾಡುವ ಕಾರ್ಯಕ್ರಮ ಇದಾಗಿದೆ. ಮಾನ್ಯ ಸಿದ್ದರಾಮಯ್ಯನವರ ಸರ್ಕಾರ ನುಡಿದಂತೆ ನಡೆದಿದೆ ಇಲ್ಲಿ ಯಾವುದೇ ಮಧ್ಯವರ್ತಿಗಳು ಇಲ್ಲ. ನೇರವಾಗಿ ನಮ್ಮ ಖಾತೆಗೆ ಹಣ ಜಮಾ ಆಗುತ್ತಿದೆ. ಪ್ರತಿಯೊಂದು ಕುಟುಂಬಗಳಿಗೂ ಆಸರೆ ಆಗುವ ಉದ್ದೇಶದಿಂದ ಈ ಗ್ಯಾರಂಟಿ ಯೋಜನೆ ಮಾಡಿದ್ದೇವೆ ಮತ ಪಡೆಯುವ ಉದ್ದೇಶ ಒಂದೇ ಆಗಿರಲಿಲ್ಲ. ಇದು ನಮ್ಮ ಸರ್ಕಾರ ನಮಗೆ ಸೇವೆ ಮಾಡಲು ನಾನು ಸಚಿವನಾಗಿದ್ದೇನೆ. ಈ ಸರ್ಕಾರ ಬರುವುದಕ್ಕೆ ಮುಂಚೆ ವರ್ಷಕ್ಕೆ 24,000 ಸಿಗುತ್ತದೆ ಎಂದು ಯಾರು ಅಂದುಕೊಂಡಿರಲಿಲ್ಲ ಎಂದು ಹೇಳಿದರು.

ಈ ವೇಳೆ ಯುವ ಮುಖಂಡರಾದ ನಿಖಿಲ ದೇಸಾಯಿ, ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸನ್ನವರ, ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಗೋಪಾಲ ದಳವಾಯಿ, ಎಪಿಎಂಸಿ ಉಪಾಧ್ಯಕ್ಷ ಬಸವರಾಜ ಆರಿಬೆಂಚಿ, ತಾ. ಪಂ. ಇಓ ಯಶವಂತಕುಮಾರ, ತಹಶೀಲ್ದಾರ ಎಸ್ ಎಸ್ ಇಂಗಳೆ, ಸಿಡಿಪಿಓ ಶ್ರೀಮತಿ ಸುನೀತಾ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ ದಂಡಿನ, ಪ. ಪಂ. ಮುಖ್ಯಾಧಿಕಾರಿ ಡಿ ಎನ್ ತಹಶೀಲ್ದಾರ, ಶಿವಾನಂದ ಭಜಂತ್ರಿ, ಶ್ರೀಮತಿ ಕಾವೇರಿ ಚಲವಾದಿ, ಈರಣ್ಣಾ ಗೌಡರ, ನಿಖಿಲ ಪಾಟೀಲ, ಮಂಜುನಾಥ ತಡಸಲೂರ, ಶಿವಾನಂದ ಕರಿಗೋಣವರ, ರಾಮನಗೌಡ ಪಾಟೀಲ, ಪ್ರಕಾಶ ವಾಲಿ, ಬಂಗಾರಪ್ಪ ಹರಳಿ, ಪಿ. ಎಂ. ಪಾಟೀಲ, ಮಹಾಂತೇಶ ಉಪ್ಪಿನ, ಮಲ್ಲು ಜಕಾತಿ, ಫಕ್ಕೀರಪ್ಪ ಹದ್ದನವರ, ಶಂಕರ ಇಟ್ನಾಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಅಂಗನವಾಡಿ–ಆಶಾ ಕಾರ್ಯಕರ್ತೆಯರು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಬಿಎಸ್‌ವೈ ವಿರುದ್ಧ ದೂರು ಪ್ರಾಮುಖ್ಯತೆ ಬೇಡ



ಚಿತ್ರದುರ್ಗ,ಮಾ.–: ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಫೋಕ್ಸೋ ಪ್ರಕರಣ ವಿಚಾರವಾಗಿ ಗೃಹ ಸಚಿವ ಪರಮೇಶ್ವರ್ ಹೇಳಿಕೆಯಲ್ಲಿ ದೂರು ನೀಡಿದ ಮಹಿಳೆ ಮಾನಸಿಕ ಅಸ್ವಸ್ಥೆ ಎಂದಿರುವುದರಿಂದ ಇದಕ್ಕೆ ಪ್ರಾಮುಖ್ಯತೆ ನೀಡುವ ಅವಶ್ಯಕತೆ ಇಲ್ಲ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಚಿತ್ರದುರ್ಗದಲ್ಲಿ ಮಾದಾರ ಚೆನ್ನಯ್ಯ ಗುರುಪೀಠಕ್ಕೆ ಭೇಟಿನೀಡಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ದೂರು ದಾಖಲಾದ ತಕ್ಷಣ ಕ್ರಮ ಕೈಗೊಳ್ಳಲಾಗದು, ಜವಬ್ದಾರಿಯಿಂದ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಈಗಾಗಲೇ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದಾರೆ. ಅವರು ಹೇಳಿಕೆ ಕೊಟ್ಟಿರುವುದು ಸರಿಯಾಗಿದೆ. ದೂರು ನೀಡಿದ ಮಹಿಳೆ ಈ ಹಿಂದೆ ಅನೇಕರ ಮೇಲೆ ಇದೇ ರೀತಿ ದೂರು ಕೊಟ್ಟಿದ್ದರೆಂದು ಹೇಳಿದ್ದಾರೆ. ರಾಜಕೀಯದಲ್ಲಿ ಹೆಸರಿಗೆ ಕಳಂಕ ತರುವ ಪ್ರಯತ್ನ ನಡೆಯುತ್ತವೆ. ಆದರೆ ಈ ಪ್ರಕರಣ ದಾಖಲಿಸಿದ ಹಿಂದೆ ಯಾವುದೇ ಸದುದ್ದೇಶ ಇಲ್ಲ. ಚುನಾವಣೆ ವೇಳೆ ಈ ರೀತಿ ಪ್ರಯತ್ನ ನಡೆಯುತ್ತಿರುತ್ತವೆ ಎಂದರು.ಬಿಜೆಪಿ ಎಲ್ಲಾ ನಿಷ್ಠಾವಂತರಿಗೆ ಟಿಕೆಟ್ ನೀಡಿದೆ. ಪಾರ್ಲಿಮೆಂಟರಿ ಬೋರ್ಡ್ ನಲ್ಲಿ ಚರ್ಚಿಸಿ ಅಭ್ಯರ್ಥಿಗಳ ಆಯ್ಕೆ ಮಾಡಲಾಗಿದೆ ಎಂದು ಹೇಳಿದ ಅವರು, ಮಾದಾರ ಚನ್ನಯ್ಯಶ್ರೀಗಳನ್ನು ಕಣಕ್ಕಿಳಿಸುವ ಬಗ್ಗೆ ನಾನು ಚರ್ಚಿಸಿಲ್ಲ. ನಾಳೆ ನಾಡಿದ್ದರಲ್ಲಿ ಉಳಿದ ಅಭ್ಯರ್ಥಿಗಳ ಹೆಸರು ಪ್ರಕಟ ಆಗಲಿದೆ ಎಂದರು.ಸಂಸದ ಎ.ನಾರಾಯಣಸ್ವಾಮಿಗೆ ಟಿಕೆಟ್ ತಪ್ಪುವ ವಿಚಾರ ಊಹಾಪೋಹ. ಬಿಜೆಪಿ ಅಧಿಕೃತ ಪಟ್ಟಿ ಬಿಡುಗಡೆ ಆದಾಗಲೇ ಅಭ್ಯರ್ಥಿ ಹೆಸರು ಬಹಿರಂಗ ಆಗಲಿದೆ. ಕೆ ಎಸ್ ಈಶ್ವರಪ್ಪ ಬೆಂಬಲಿಗರ ಸಭೆ ಹಾಗೂ ಹಾವೇರಿ, ದಾವಣಗೆರೆಯಲ್ಲಿ ಭಿನ್ನಮತ ವಿಚಾರವಾಗಿ ನಾವು, ವರಿಷ್ಠರು ಅವರ ಜತೆ ಮಾತಾಡಿದ್ದೇವೆ ಶೀಘ್ರವೇ ಎಲ್ಲವೂ ಸರಿ ಹೋಗುತ್ತದೆ ಎಂದು ಹೇಳಿದರು.

6ನೇ ತರಗತಿ ವಸತಿ ಶಾಲೆಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ,ಮಾ.– 2024–25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 6ನೇ ತರಗತಿಗಳಿಗೆ ಪ್ರವೇಶ ನೀಡಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್,ಬೌದ್ಧ, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಸಲಾಗಿದೆ. ಆಸಕ್ತಿಯುಳ್ಳ ವಿದ್ಯಾರ್ಥಿಗಳು ಅಥವಾ ಪಾಲಕರು ಮಾ.31 ಒಳಗಾಗಿ ಆನ್‌ಲೈನ್ ಸೇವಾ ಸಿಂಧು ಪೋರ್ಟ್‌ಲ್ http://sevasindhuservices.karnataka.gov.in ಲಿಂಕ್ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ http://dom.karnataka.gov.in eÁ®vÁt ಅಥವಾ ಸಮೀಪದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಆಫ್‌ಲೈನ್ ಮೂಲಕ ಅರ್ಜಿಗಳನ್ನು ಸ್ವಿಕರಿಸಲಾಗುವುದಿಲ್ಲ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ. ಅಬ್ಬುಲರಶೀದ ಮಿರ್ಜನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಯುವ ಸಂಘಗಳ ಒಕ್ಕೂಟ ಆಶ್ರಯದಲ್ಲಿ ಜರುಗಿದ ಮಹಿಳಾ ದಿನಾಚರಣೆ

ಮೂಡಲಗಿ: ಮಹಿಳೆಯರು ಮನಸ್ಸು ಮಾಡಿದರೇ ನಮ್ಮ ಕರ್ನಾಟಕ ರಾಜ್ಯದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಂತೆ ನೋಡಿಕೊಳ್ಳುವ ಶಕ್ತಿ ಸ್ತ್ರೀ ಶಕ್ತಿಗಿದೆ. ಮಹಿಳೆಯರು ತಾವುಗಳು ಜಾಗೃತರಾಗಿ ತಮ್ಮ ಹೆಣ್ಣು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುಬೇಕೆಂದು ಸಿಡಿಪಿಒ ಯಲ್ಲಪ್ಪ ಗದಾಡಿ ಹೇಳಿದರು.ಶುಕ್ರವಾರದಂದು ಪಟ್ಟಣದ ಶ್ರೀ ಮಂಜುನಾಥ ಸೈನಿಕ ತರಬೇತಿ ಕೇಂದ್ರದ ಸಭಾಂಗಣದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಜಾಗೃತಿ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನೆ ಇಲಾಖೆ ಅರಭಾವಿ ಕಾರ್ಯಾಲಯ ಮೂಡಲಗಿ ಹಾಗೂ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಬೆಳಗಾವಿ ಆಶ್ರಯದಲ್ಲಿ ಜರುಗಿದ,ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗ ವಾಗಿ ಮಹಿಳಾ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ ಹಾಗೂ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ ಮತ್ತು ಪುರುಷ ಪರಸ್ಪರ ಹೊಂದಾಣಿಕೆ ಹಾಗೂ ಜವಾಬ್ದಾರಿಯೊಂದಿಗೆ ಮುನ್ನಡೆದಾಗ ಮಾತ್ರ ಯಾವುದೇ ಕ್ಷೇತ್ರದಲ್ಲಾದರೂ ಸಾಧನೆ ಮಾಡಬಹುದು ಎಂದರು.ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲಾಧ್ಯಕ್ಷ ಸಿದ್ದಣ್ಣ ದುರದುಂಡಿ, ಮಾಜಿ ವಕೀಲ ಸಂಘದ ಅಧ್ಯಕ್ಷ ಕೆಂಪ್ಪಯ್ಯ ಮಗದುಮ್ಮ, ವಕೀಲರಾದ ಲಕ್ಷ್ಮಣ ಅಡಿಹುಡಿ ಮಾತನಾಡಿ, ಮಹಿಳೆ ಯಾವುದೇ ಕೆಲಸವನ್ನು ಅತ್ಯಂತ ಜವಾಬ್ದಾರಿಯುತವಾಗಿ ಹಾಗೂ ಸಮರ್ಪಣಾ ಮನೋಭಾವದೊಂದಿಗೆ ನಿಭಾಯಿಸಯತ್ತಾಳೆ. ಹೀಗಾಗಿಯೇ ಅನಾದಿ ಕಾಲದಿಂದಲೂ ಮಹಿಳೆ ಸಾಧಕಿಯಾಗಿ ಮಾತ್ರವಲ್ಲದೆ ಅನೇಕ ಹೋರಾಟಗಳಲ್ಲೂ ತೊಡಗಿಸಿಕೊಂಡಿದ್ದಾಳೆ ಎಂದು ಮಹಿಳೆಯರನ್ನು ಶ್ಲಾಘನಿಸಿದರು.

ಇದೇ ಸಂದರ್ಭದಲ್ಲಿ ನ್ಯಾಯವಾದಿ ಅಕ್ಕಮಹಾದೇವಿ ಗೋಡ್ಯಾಗೋಳ ಅವರಿಗೆ ಕಿತ್ತೂರು ರಾಣಿ ಚನ್ನಮ್ಮ ಮತ್ತು ಐಶ್ವರ್ಯ ಮಿರ್ಜಿಗೆ ನಟರಾಜ ನ್ಯಾಟ ಪ್ರಶಸ್ತಿ ನೀಡಿ ಗೌರವಿಸಿದರು. ಅಂಗನವಾಡಿ ಮೇಲ್ವಿಚಾರಕಿಯರಿಗೆ ಮತ್ತು ಮೂಡಲಗಿ 16 ವಲಯದ ಅಂಗನವಾಡಿ ಕೇಂದ್ರದ ಉತ್ತಮ ಕಾರ್ಯಕರ್ತೆಯರಿಗೆ ಅಭಿನಂದನಾ ಪತ್ರ ನೀಡುವ ಮೂಲಕ ಅವರನ್ನು ಸತ್ಕರಿಸಲಾಯಿತು.

ಈ ವೇಳೆಯಲ್ಲಿ ಪೋಷಣ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ ಗರ್ಭಿಣಿ ಮಹಿಳೆಯರಿಗೆ ಸಿಮಂತ ಕಾರ್ಯಕ್ರಮ ಮತ್ತು ಮಕ್ಕಳಿಗೆ ಅನ್ನ ಪ್ರಾಶನ ಕಾರ್ಯಕ್ರಮ ಜರುಗಿತು.ವೇದಿಕೆಯಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಇಂದಿರಾ ಭೋವಿ, ಭಗೀಥರ ಯುವತಿ ಮಂಡಳದ ಅಧ್ಯಕ್ಷೆ ಕಸ್ತೂರಿ ಹೆಗ್ಗಾಣಿ, ಪಾಂಡುರಂಗ ರುಕ್ಮಣಿ ಮಹಿಳಾ ಸ್ವಸಹಾಯ ಸಂಘದ ಅಧ್ಯಕ್ಷೆ ಗೀತಾ ಜಾಗನೂರ, ಪೂರ್ಣಿಮಾ ಗೋಡ್ಯಾಗೋಳ ಹಾಗೂ ಅಂಗನವಾಡಿ ಕೇಂದ್ರದ ಕಾರ್ಯಕರ್ತೆಯರು, ಮಹಿಳಾ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಎಂಡಿಆರ್‌ಎಸ್ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ ಮಾ–:ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಿರ್ವಹಣೆಯಾಗುತ್ತಿರುವ ಕೊಪ್ಪಳ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಡಾ ಎ.ಪಿ.ಜೆ.ಅಬ್ದುಲ್ ಕಲಾಂ ಶಾಲೆಗಳಲ್ಲಿ 2024–25 ನೇ ಸಾಲಿಗೆ 6ನೇ ತರಗತಿಯ ಪ್ರವೇಶ ಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಸಲಾಗಿದ್ದು, ಅವದಿ ಯನ್ನು ಮಾರ್ಚ 31ರವರೆಗೆ ವಿಸ್ತರರಿಸಲಾಗಿದೆ. ಪೋಳಕರು ಅಥವಾ ವಿದ್ಯಾರ್ಥಿಗಳು ಹತ್ತಿರದ ವಸತಿ ಶಾಲೆ ಅಥವಾ ಅಲ್ಪಸಂಖ್ಯಾತ ಮಾಹಿತಿ ಕೇಂದ್ರಗಳಲ್ಲಿ ಎಲ್ಲಾ ದಾಖಲೆಗಳೊಂದಿಗೆ ಭೇಟಿ ನೀಡಿ ಆನ್‌ಲೈನ್ ಮುಖಾಂತರ ಸೇವಾಸಿಂಧು ಪೋರ್ಟಲ್ https://sevasin dhuservices.karnataka.gov.in ಅಥವಾ dom. karnataka.gov.in/koppal/public ನಲ್ಲಿ ನೇರವಾಗಿ ಅರ್ಜಿ ಮಾ.31 ರೊಳಗೆ ಅರ್ಜಿಯನ್ನು ಸಲ್ಲಿಸಬೇಕು. ಅಪೂರ್ಣವಾದ ಮತ್ತು ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಹೆಚ್ಚಿನ ಮಾಹಿ ತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿ ಹಾಗೂ ತಾಲ್ಲೂಕು ಅಲ್ಪಸಂ ಖ್ಯಾತರ ಮಾಹಿತಿ ಕೇಂದ್ರ, ಕೊಪ್ಪಳ ದೂ.ಸಂ: 08539–225070 ಮೊ.ಸಂ: 8088892549, ಇನ್ನುಳಿದ ತಾಲ್ಲೂಕು ಅಲ್ಪಸಂ ಖ್ಯಾತರ ಮಾಹಿತಿ ಕೇಂದ್ರಗಳಾದ ಗಂಗಾವತಿ ಮೊ.ಸಂ: 99725 246 70, ಕುಷ್ಟಗಿ ಮೊ.ಸಂ: 8861610578,ಯಲಬುರ್ಗಾ ಮೊ.ಸಂ: 96205 22537 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಅಲ್ಪಸಂ ಖ್ಯಾತರ ಕಲ್ಯಾಣಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊಪ್ಪಳ ತಾಲೂಕ ಗ್ಯಾರಂಟಿ ಕಮಿಟಿ : ಆದೇಶ ಪತ್ರ ಕೊಟ್ಟ ಎಡಿಸಿ

ಕೊಪ್ಪಳ: ಕರ್ನಾಟಕ ಸರಕಾರದ ಬಹುಮುಖ್ಯ ಸಮಾಜಮುಖಿ ಯೋಜನೆಯಾದ ಗ್ಯಾರಂಟಿ ಸ್ಕೀಂಗಳ ಸಮರ್ಪಕ ಅನುಷ್ಠಾನಕ್ಕೆ ಸರಕಾರೇತರ ಸಮಿತಿ ರಚನೆ ಮಾಡಿದ್ದು ಮೂರು ಹಂತದ ಕಮಿಟಿಯಲ್ಲಿ ಕೊಪ್ಪಳ ತಾಲೂಕ ಸಮಿತಿಯನ್ನು ರಚಿಸಿ ಜಿಲ್ಲಾಧಿಕಾರಿ ಹೊರಡಿಸಿದ ಆದೇಶ ಪ್ರತಿಯನ್ನು ಅಪರ ಜಿಲ್ಲಾಧಿಕಾರಿ ಸಾವಿತ್ರಿ ಕಡಿ ಸದಸ್ಯರಿಗೆ ಕೊಟ್ಟರು.

ನಗರದ ಜಿಲ್ಲಾಡಳಿತ ಭವನದ ತಮ್ಮ ಕಛೇರಿಯಲ್ಲಿ ಮುನಿರಾಬಾದಿನ ಮಾಜಿ ತಾಲೂಕ ಪಂಚಾಯತಿ ಅಧ್ಯಕ್ಷ ಬಾಲಚಂದ್ರ ಸ್ಯಾಮ್ಯುಯೇಲ್ ಅಧ್ಯಕ್ಷತೆಯಲ್ಲಿ ಒಟ್ಟು 16 ಜನ ಸಮಿತಿಯನ್ನು ರಚಿಸಿ ಸರಕಾರದ ಮಾನ್ಯತೆಯೊಂದಿಗೆ ಆದೇಶ ನೀಡಲಾಗಿದೆ.

ರಾಜ್ಯದ ಜನತೆಗೆ ಶಕ್ತಿ, ಗೃಹ ಜ್ಯೋತಿ, ಅನ್ನ ಭಾಗ್ಯ, ಗೃಹ ಲಕ್ಷ್ಮೀ, ಮತ್ತು ಯುವ ನಿಧಿ ಯೋಜನೆಗಳನ್ನು ಈಗಾಗಲೇ ಜಾರಿಗೊಳಿಸಿದ್ದು, ಸದರಿ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿ ಆದೇಶಿಸಲಾಗಿರುತ್ತದೆ. ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಕ ಮಾಡುವ ಅಧಿಕಾರವನ್ನು ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರಿಗೆ ಪ್ರತ್ಯಾಯೋಜಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಸಮಿತಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಕ ಮಾಡಿ ಈ ಕುರಿತಂತೆ ಆದೇಶ ಹೊರಡಿಸಲು ಸೂಚಿಸಿದ್ದು, ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಎರಡು ವರ್ಷದ ಅವಧಿಗೆ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿ ಆದೇಶಿಸಿದ್ದಾರೆ.

ಸಮಿತಿಗೆ ತಾಲೂಕ ಪಂಚಾಯತಿ ಕಾರ್ಯನಿರ್ವಾಹಣ ಅಧಿಕಾರಿಗಳು ಸದಸ್ಯ ಕಾರ್ಯದರ್ಶಿಗಳಾಗಿದ್ದು, ದೇವರಾಜ ನಡುವಿನಮನಿ, ರಾಮಣ್ಣ ಚೌಡ್ಕಿ ಹಟ್ಟಿ, ರಮೇಶ ಹ್ಯಾಟಿ ಭಾಗ್ಯನಗರ, ಜ್ಯೋತಿ ಮಂಜುನಾಥ ಗೊಂಡಬಾಳ, ಲತಾ ಗವಿಸಿದ್ದಪ್ಪ ಚಿನ್ನೂರ, ಅನ್ನದಾನಸ್ವಾಮಿ ಸಾಲಿಮಠ ಬೆಟಗೇರಿ, ಪರಶುರಾಮ ಕೊರವರ, ಅಶೋಕ ಗೋರಂಟ್ಲಿ, ಮಹಾಂತೇಶ ಹಾನಗಲ್, ಮಂಜುನಾಥ ಅಂಗಡಿ, ಎ. ಧರ್ಮರಾಜರಾವ್, ಆನಂದಪ್ಪ ಕಿನ್ನಾಳ, ಲಕ್ಷ್ಮಣ ಡೊಳ್ಳಿನ್ ಮತ್ತು ಅನ್ವರ ಹುಸೇನ್ ಗಡಾದ ಅವರನ್ನು ಸಮಿತಿಯ ಸದಸ್ಯರನ್ನಾಗಿ ಮಾಡಲಾಗಿದೆ. ಸದರಿ ಸಮಿತಿಯು ಮನೆ ಮನೆಗೆ ತೆರಳಿ ಸಮೀಕ್ಷೆ ಮಾಡುತ್ತಿದ್ದು, ತೊಂದರೆಗಳಿದ್ದಲ್ಲಿ ಅಧಿಕಾಋಇಗಳ ಮೂಲಕ ಸರಿಪಡಿಸುವ ಮತ್ತು ಅರ್ಹತೆಯಿದ್ದೂ ಯೋಜನೆ ಲಭಿಸದಿದ್ದಲ್ಲಿ ಅವರಿಗೆ ಯೋಜನೆ ತಲುಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ. ಎಡಿಸಿ ಸಾವಿತ್ರಿ ಬಿ. ಕಡಿ ಅವರಿಂದ ಅಧ್ಯಕ್ಷ ಬಾಲಚಂದ್ರನ್, ಸದಸ್ಯರಾದ ಜ್ಯೋತಿ ಎಂ. ಗೊಂಡಬಾಳ, ದೇವರಾಜ ನಡುವಿನಮನಿ ಅದೇಶ ಸ್ವೀಕರಿಸಿದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಾ ಇಟ್ಟಂಗಿ, ಎಸ್.ಟಿ. ಘಟಕ ತಾಲೂಕ ಅಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ ಇದ್ದರು.

ಎಸ್.ಜಿ.ಬಿ.ಐಟಿ ವಿದ್ಯಾರ್ಥಿಗಳಿಗೆ ಬಹುಮಾನ



ಬೆಳಗಾವಿ–:ಬೆಳಗಾವಿಯ ಎಸ್.ಜಿ. ಬಾಳೆಕುಂದ್ರಿ ತಾಂತ್ರಿಕ ಮಹಾವಿದ್ಯಾಲಯದಎಲೆಕ್ಟ್ರಿಕಲ್ ಮತ್ತುಇಲೆಕ್ಟ್ರಾನಿಕ್ಸ್ ವಿಭಾಗದಅಂತಿಮ ವರ್ಷದ ವಿದ್ಯಾರ್ಥಿಗಳಾದ, ಸಿಮರನ್ ಪಟೇಲ್ ಮತ್ತು ಮುಷರಫ್ ಶಿಲ್ಲೇದಾರ್ ಇವರು ಮಹಾ ರಾಷ್ಟ್ರದಅ ಣ್ಣಾಸಾಹೇಬ್ ಡಾಂಗೆತಾಂತ್ರಿಕಕಾಲೇಜಿನಲ್ಲಿ ನಡೆದರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣದಲ್ಲಿ ಪ್ರಬಂಧ ಮಂಡನೆ ಸ್ಪರ್ಧೆಯಲ್ಲಿಅಕ್ಟೋಬರ್ 28, 2023 ರಂದು ದ್ವಿತೀಯ ಬಹುಮಾನ ಪಡೆದರು.ಈ ವಿದ್ಯಾರ್ಥಿಗಳಿಗೆ ಡಾ॥ ಸುಪನ್ನಎಸ್ ಶಿರಗುಪ್ಪೆ, ಎಲೆಕ್ಟ್ರಿಕಲ್ ಮತ್ತುಇಲೆಕ್ಟ್ರಾನಿಕ್ಸ್ ವಿಭಾಗದ ಮುಖ್ಯಸ್ಥೆ ಮತ್ತು ಪ್ರೊ. ಮಲ್ಲಿಕಾರ್ಜುನ ಭಗವತಿ ಮಾರ್ಗದರ್ಶನ ನೀಡಿದರು. ಎಸ್.ಜಿ.ಬಿ.ಐಟಿಅಧ್ಯಕ್ಷರಾದ ಪೂಜ್ಯ ಶ್ರೀ ಡಾ॥ ಅಲ್ಲಮಪ್ರಭು ಸ್ವಾಮೀಜಿ, ಆಡಳಿತ ಮಂಡಳಿ ಅಧ್ಯಕ್ಷರಾದಡಾ॥ ಎಫ್. ವಿ. ಮಾನ್ವಿ, ಪ್ರಾಂಶುಪಾಲರುಡಾ॥ ಬಿ. ಆರ್. ಪಟಗುಂದಿ, ಯೋಜನಾ ಸಂಯೋಜಕರಾದಡಾ॥ ಪ್ರಶಾಂತ್ ಭಗವತಿ ಮತ್ತು ಪ್ರೋ. ಪ್ರವೀಣಾ ಮಾಳಿ ವಿಜೇತರನ್ನು ಅಭಿನಂದಿಸಿದರು.

ಜೀಜಾವುಮಾಸಾಹೇಬ ಅವರ ಜೀವನ ಮತ್ತು ಆದರ್ಶಗಳ ಕುರಿತು ಒಂದು ದಿನದ ವಿಚಾರ ಸಂಕಿರಣ

ವಿಜಯಪುರ: ಭಾರತದ ಇತಿಹಾಸದಲ್ಲಿ ಅಮರರಾಗಿ ಉಳಿದ ಜೀಜಾಮಾತಾ ಅವರು ಸ್ವಾಭಿಮಾನದ ಪ್ರತೀಕ ಎಂದು ಮಹಿಳಾ ವಿವಿಯ ಕುಲಪತಿ ಪ್ರೊ.ಬಿ.ಕೆ.ತುಳಸಿಮಾಲ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಜೀಜಾವುಮಾಸಾಹೇಬ ಅವರ ಜೀವನ ಮತ್ತು ಆದರ್ಶಗಳ ಕುರಿತು ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತಾನಾಡಿದರು.

ಭಾರತದ ಚರಿತ್ರೆಯಲ್ಲಿ ಆಗಿ ಹೋದ ಅನೇಕ ವೀರ ಮಹಿಳೆಯರಲ್ಲಿ ಮರಾಠ ಸಂಸ್ಕೃತಿಯ ಜೀಜಾಮಾತಾ ಸ್ವಾಭಿಮಾನದ ಪ್ರತೀಕರಾಗಿದ್ದಾರೆ. ಇಂದಿನ ತಾಯಿಯಂದಿರು ಜೀಜಾಮಾತಾರ ವ್ಯಕ್ತಿತ್ವದಿಂದ ಪ್ರೇರಣೆಗೊಳ್ಳಬೇಕು. ಚರಿತ್ರೆಯು ನಮಗೆ ಅನೇಕ ಪಾಠಗಳನ್ನು ಕಲಿಸುತ್ತದೆ. ಆ ಪಾಠಗಳು ನಮ್ಮ ಸಮಾಜದ ವ್ಯಕ್ತಿತ್ವವನ್ನು ಸುಂದರಗೊಳಿಸುತ್ತವೆ. ಇಂತಹ ವೀರ ಮಹಿಳೆಯರ ಕುರಿತು ಅಧ್ಯಯನಗಳು, ಕಾರ್ಯಗಾರಗಳು, ಚಿಂತನಾಗೋಷ್ಠಿಗಳು ನಡೆಯಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ಮರಾಠ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಕಾಶ ಪಾಗೋಜಿ ಮಾತನಾಡಿ, ಅಭಿವೃದ್ಧಿ ನಿಗಮವು ಮರಾಠ ಸಮುದಾಯದ ಪ್ರಗತಿಗೆ ಅನೇಕ ಯೋಜನೆಗಳನ್ನು ಹಾಕಿಕೊಂಡಿದೆ. ಅದರಲ್ಲಿ ವಿಚಾರ ಸಂಕಿರಣವು ಒಂದು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ಮಹಿಳಾ ಸಬಲೀಕರಣದ ಆರಂಭವು 17 ನೇ ಶತಮಾನದಲ್ಲಿ ಪ್ರಾರಂಭವಾಗಿದ್ದು, ಇತಿಹಾಸದಲ್ಲಿರುವ ಅನೇಕ ವೀರ ಮಹಿಳೆಯರು ನಮ್ಮ ಬದುಕಿಗೆ ಪ್ರೇರಣೆಯಾಗಿದ್ದಾರೆ. ಇಂದಿನ ಸಮಾಜವು ಗತಕಾಲದ ಇತಿಹಾಸದ ಆಧಾರದ ಮೇಲೆ ಹೊಸ ಜೀವನವನ್ನು ರೂಪಿಸಿಕೊಳ್ಳಬೇಕೆಂದು ಎಂದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ತುಳಸಿರಾಮ ಸೂರ್ಯವಂಶಿ, ಭೀಮಾಶಂಕರ ಶಿವಳಕರ ಮರಾಠಾ ಸಂಸ್ಕೃತಿ ಕುರಿತು ವಿವರಿಸಿದರು.

ರಾಹುಲ್ ಜಾಧವ, ವಿಜಯಕುಮಾರ ಚವ್ಹಾಣ, ಸಾಹಿತಿ ಡಾ. ವಿಠ್ಠಲರಾವ ಗಾಯಕವಾಡ, ಡಾ. ಪ್ರಕಾಶ ಖಾಡೆ, ಪ್ರೊ. ಮಹೇಶ ಚಿಂತಾಮಣಿ, ಅಶೋಕ ಆಸಂಗಿ, ಡಾ. ಎಂ. ಪಿ. ಬಳಿಗಾರ, ರಮೇಶ ಚವ್ಹಾಣ ಮತ್ತಿತರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಹಿಂದೂಳಿದ ವರ್ಗಗಳ ಕೋಶದ ಸಂಯೋಜಕ ಪ್ರೊ. ವಿಷ್ಣು ಶಿಂದೆ ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿದ್ಯಾರ್ಥಿನಿಯರು ಮಹಿಳಾ ಗೀತೆ ಹಾಡಿದರು, ಡಾ. ರೂಪಾ ನಿರೂಪಿಸಿದರು, ವೀಣಾ ಮುದೋಳ ವಂದಿಸಿದರು.

ವಿದ್ಯುತ್ ವ್ಯತ್ಯಯ

ಬೆಳಗಾವಿ,ಮಾ.–: ಕ.ವಿ.ಪ್ರ.ನಿ.ನಿ. ವತಿಯಿಂದ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವ ಹಿನ್ನಲೆಯಲ್ಲಿ ಮಾ. 17 ರಂದು ಬೆಳಗ್ಗೆ 9 ಘಂಟೆಯಿಂದ ಸಂಜೆ 5 ಘಂಟೆಯವರೆಗೆ 110 ಕೆ.ವ್ಹಿ. ಹಿರೇಬಾಗೇವಾಡಿ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ಮುತ್ನಾಳ, ವಿರಕನಕೊಪ್ಪ, ಅರಳಿಕಟ್ಟಿ, ಬಸಾಪೂರ, ಹಿರೇಬಾಗೇವಾಡಿ, ಭೆಂಡಿಗೇರಿ, ಗಜಪತಿ, ಅಂಕಲಗಿ,ಹುಲಿಕವಿ,ಕೆ. ಕೆ. ಕೊಪ್ಪ,ಕಲಾರಕೊಪ್ಪ,ಸಿದ್ಧನಹಳ್ಳಿ, ಬಡೇಕೊಳ್ಳ ಮಠ, ಹಲಗಿಮರ್ಡಿ, ನಾಗೇನಟ್ಟಿ, ನಾಗೇರಹಾಳ, ಬಡಸ, ನಂದಿಹಳ್ಳಿ ಹಾಗೂ ಕುಕಡೊಳ್ಳಿ ಗ್ರಾಮಗಳಿಗೆ ಹಾಗೂ ಖಾನಾಪೂರ ತಾಲೂಕಿನ ಹಿರೇಹಟ್ಟಿಹೊಳಿ, ಗಾಡಿಕೊಪ್ಪ, ಹಾಗೂ ಪಾರಿಶ್ವಾಡ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಳಗಾವಿ ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹುವಿಸಕಂನಿ, ಮತ್ತು ಕಾರ್ಯನಿರ್ವಾಹಕ ಇಂಜಿನೀಯರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಬೆಳಗಾವಿ,ಮಾ–: ಬೆಳಗಾವಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರು–05, ಬೆರಳಚ್ಚುಗಾರರು–01 ಆದೇಶಜಾರಿ ಕಾರರು–02 ಮತ್ತು ಸಿಪಾಯಿ ಅಥವಾ ಜವಾನ–33 ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಸಲಾಗಿದೆ.ಆಸಕ್ತರು ಏ.14 ರಾತ್ರಿ 11.59 ರ ಒಳಗಾಗಿ ಬೆಳಗಾವಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://belagavi.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮೂಲಕ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಶುಲ್ಕವನ್ನು ಪಾವತಿಸಲು ಏಪ್ರೀಲ್.15 ಕೊನೆಯ ದಿನವಾಗಿರುತ್ತದೆ.ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ, ಅಂಚೆ ಮೂಲಕ ಅಥವಾ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಬೆಳಗಾವಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.